ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ. ಎಂ. ಎಫ್. ಸಿ.ರವರ ನ್ಯಾಯಾಲಯ, ಮಡಿಕೇರಿ.

**ಸಿ.ಸಿ.ನಂಃ 1096/2020**

ಪಿಡಬ್ಲ್ಯುಃ - 12

ದಿನಾಂಕಃ 22.01.2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

| | |
|---|---|
| ಸಾಕ್ಷಿದಾರರ ಹೆಸರು | - ಘನ ಸಾಮ್ರಾಜ್ |
| ತಂದೆಯ ಹೆಸರು | - ಪಿ. ಎಸ್. ಆನಂದ |
| ವಯಸ್ಸು | - 51 ವರ್ಷ |
| ವೃತ್ತಿ | - ವ್ಯವಸಾಯ |
| ವಾಸಸ್ಥಳ | - ಹೊಸಕೇರಿ ಗ್ರಾಮ |

ಮುಖ್ಯ ವಿಚಾರಣೆಃ ಮಾನ್ಯ ಎಪಿಪಿ ಯವರಿಂದಃ-

ಸಾಕ್ಷಿಗೆ ದಿಃ 08.08.2020 ರಂದು ಬರೆದ ಅಮಾನತು ಮಹಜರನ್ನು ತೋರಿಸಲಾಯಿತು. ಸಾಕ್ಷಿ ಅದರಲ್ಲಿನ ತನ್ನ ಸಹಿಯನ್ನು ನೋಡಿ ಗುರುತಿಸಿರುತ್ತಾರೆ. ಅದನ್ನು ಈಗಾಗಲೇ ನಿಪಿ- 12 ಎಂದು ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ-12(ಬಿ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ನಾನು ಪೊಲೀಸ್ ಠಾಣೆಗೆ ಹೋದಾಗ ಮಾಡಿರುತ್ತೇನೆ. ಸದರಿ ಸಹಿಯನ್ನು ಸುಮಾರು 5 ವರ್ಷಗಳ ಹಿಂದೆ ಮಾಡಿರುತ್ತೇನೆ. ಚಾಸಾ-1 ನನಗೆ ಗೊತ್ತಿಲ್ಲ. ನನ್ನ ಮುಂದೆ ಯಾವುದೇ ವಸ್ತುಗಳನ್ನು ಅಮಾನತು ಪಡಿಸಿಕೊಂಡಿರುವುದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಮಾನ್ಯ ಸರಕಾರಿ ಅಭಿಯೋಜಕರು ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ನೀಡಲಾಯಿತು)**

ಪಾಟೀ ಸವಾಲು ಮಾನ್ಯ ಸರಕಾರಿ ಅಭಿಯೋಜಕರಿಂದಃ-

ದಿಃ 08.08.2020 ರಂದು ಪೊಲೀಸರು ನನ್ನನ್ನು ಮತ್ತು ದಿನೇಶ್ ಮತ್ತು ವೆಂಕಟ ಅವರನ್ನು ಠಾಣೆಗೆ ಕರೆದು, ಅವರು ಕೃತ್ಯಕ್ಕೆ ಬಳಸಿದ ಗುದ್ದಲಿಯನ್ನು ವಶಕ್ಕೆ ಪಡೆದು ನಿಪಿ-12 ಕ್ಕೆ ಸಹಿ ಪಡೆದಿದ್ದಾರೆ ಎಂದರೆ ಸರಿಯಲ್ಲ. ನಿಪಿ-12 ರ ವಿಚಾರ ತಿಳಿದಿದ್ದರೂ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲುಃ - ಇಲ್ಲ.

ಮರು ವಿಚಾರಣೆಃ - ಇಲ್ಲ

ಮುಕ್ತ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಓ. ಹೇ. ಕೇ. ಸರಿ ಇದೆ.
ಸಹಿ/-

**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ. ಎಂ. ಎಫ್. ಸಿ, ಮಡಿಕೇರಿ.**